<u>ಕರ್ನಾಟಕ ವಿಧಾನಪರಿಷತ್ತು</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1393
ಸದಸ್ಯರ ಹೆಸರು : ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 15-03-2021
ಉತ್ತರಿಸುವ ಸಚಿವರು : ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
1	ಮೈಸೂರು ಜಿಲ್ಲೆ ಟಿ.ನರಸೀಪುರದಲ್ಲಿ ಸಾಂಸ್ಕೃತಿಕ ಭವನ ನಿರ್ಮಾಣ ಮಾಡಲು 10.00 ಲಕ್ಷ ರೂಪಾಯಿ ಮಂಜೂರಾಗಿದ್ದು, ನಿವೇಶನ ಸಿಕ್ಕಿಲ್ಲ ಎಂಬ ಕಾರಣದಿಂದ ಹಣ ಬಳಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪ್ರಸ್ತುತ ವಿಷಯ ಯಾವ ಹಂತದಲ್ಲಿದೆ;	• ಹೌದು • ನಿವೇಶನ ಲಭ್ಯವಿಲ್ಲದೇ ಇರುವುದರಿಂದ, ಸದರಿ ಸಾಂಸ್ಕೃತಿಕ ಭವನಕ್ಕೆ ಬಿಡುಗಡೆ ಮಾಡಿದ ಅನುದಾನ ರೂ.10.00 ಲಕ್ಷಗಳನ್ನು ದಿನಾಂಕ:31-05-2014ರಲ್ಲಿ ಸರ್ಕಾರಕ್ಕೆ ಜಮೆ ಮಾಡಲಾಗಿದೆ.
2	ಟಿ. ನರಸೀಪುರ ಸಾಂಸ್ಕೃತಿಕ ಭವನಕ್ಕೆ ಪುರಸಭೆಯವರು ನಿವೇಶನ ಒದಗಿಸುತ್ತಾರೆಯೇ; ಒದಗಿಸಿದಲ್ಲಿ, ಕಟ್ಟಡ ನಿರ್ಮಾಣ ಕಾರ್ಯ ಯಾವಾಗನಿಂದ ಪ್ರಾರಂಭವಾಗಲಿದೆ.	• ಪುರಸಭೆಯವರು ನಿವೇಶನ ಒದಗಿಸಿದಲ್ಲಿ ನಿಯಮಾನುಸಾರ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು.
3	ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳು ಆಸಕ್ತಿ ವಹಿಸಿ ಸಾಂಸ್ಕೃತಿಕ ಭವನ ನಿರ್ಮಾಣ ಕಾರ್ಯವನ್ನು ಈ ವರ್ಷವಾದರೂ ಪ್ರಾರಂಭ ಮಾಡುವುದೇ?	• ನಿವೇಶನ ನೀಡಿದ ನಂತರ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಕಡತ ಸಂಖ್ಯೆ: ಕಸಂವಾ 15 ಕವಿಸ 2021

(ಅರವಿಂದ ಲಿಂಬಾವಳಿ)
ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು